**<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು</u>**

ದಿನಾಂಕಃ 18ನೇ ಮಾರ್ಚ್ ತಿಂಗಳು 2026 ರಂದು

**<u>ಸಿಸಿ ನಂ.947/2025</u>**

**ಫಿರ್ಯಾದುದಾರರುಃ** ಶ್ರೀ.ಮಧು, ಬಿನ್ ಚಂದ್ರಹಾಸಗೌಡ,
32 ವರ್ಷ, ವಾಸಃ ಮೂಡಲಕೊಪ್ಪಲು ಗ್ರಾಮ ,
ಕಸಬಾ ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀ.ಹೆಚ್.ಕೆ.ಅರ್ಜುನ್, ಬಿನ್ ಕೆಂಚನಾಯಕ,
35 ವರ್ಷ, ವಾಸಃ ಹಂಡನಹಳ್ಳಿ ಗ್ರಾಮ,
ಬಿಳಿಕೆರೆ ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**<u>ಭಾರತೀಯ ನಾಗರಿಕಾ ಸುರಕ್ಷಾ ಸಂಹಿತೆಯ ಕಲಂ 274 ರ ಅಡಿಯಲ್ಲಿ ಆರೋಪಣಾ ಸಾರಾಂಶ</u>**

ಆರೋಪಿಯಾದ ನೀವು ಮತ್ತು ಫಿರ್ಯಾದಿದಾರರಾದ ಶ್ರೀ.ಮಧುರವರು ಹಲವು ವರ್ಷಗಳಿಂದ ಪರಿಚಯಸ್ಥರಾಗಿದ್ದು, ಸದರಿ ಪರಿಚಯ ಆಧಾರದ ಮೇಲೆ ಜನವರಿ – 2025 ಕೊನೆಯ ವಾರದಲ್ಲಿ ನೀವು ನಿಮ್ಮ ದರದ್ದು ನಿಮಿತ್ತ ಅಂದರೆ ಕೈ ಸಾಲ, ಕೃಷಿ ಸಾಲ ಮತ್ತು ಮನೆ ಸಾಲಗಳನ್ನು ತೀರಿಸಲು ಅವರಿಂದ ದಿನಾಂಕಃ ರೂ.2,50,000/–ಗಳನ್ನು ಆರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ದಿನಾಂಕಃ 01.07.2025 ರಂದು ಪಾವತಿಯಾಗುವಂತೆ ನೀವು ಇಸಾಫ್ ಸಣ್ಣ ಹಣಕಾಸು ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ಸಂಖ್ಯೆಃ 925294 ಅನ್ನು ರೂ.2,50,000/–ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅದನ್ನು ಅವರು ತಮ್ಮ ಖಾತೆ ಹೊಂದಿದ ಕರ್ನಾಟಕ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕಃ 02.07.2025ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದುದಾರರು ನಿಮಗೆ ದಿನಾಂಕಃ 08.07.2025 ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯ ಮೂಲಕ ನೋಟೀಸ್

ಕಳುಹಿಸಿದ್ದು, ಸದರಿ ನೋಟೀಸನ್ನು ನೀವು ದಿನಾಂಕಃ 15.07.2025 ರಂದು ಪಡೆದುಕೊಂಡಿದ್ದರೂ ಸಹ ನೀವು ಉದ್ದೇಶಪೂರ್ವಕವಾಗಿ ಚೆಕ್‌ನಲ್ಲಿ ನಮೂದಿಸಿದ ಹಣವನ್ನಾಗಲಿ ಮತ್ತು ಪ್ರತ್ಯುತ್ತರವನ್ನಾಗಲೀ ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ.138ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ANITHA
Digitally signed by ANITHA
Date: 2026.03.18 17:49:47 +0530

Sd/-
(ಅನಿತ)
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ